ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ಜಂಟಿ ಆಯುಕ್ತರು (ಘತ್ಯಾನಿ)ರವರ ಕಛೇರಿ, ಬಿ.ಬಿ.ಎಂ.ಪಿ ಕೇಂದ್ರ ಕಛೇರಿ ಆವರಣ, ಎನ್. ಆರ್. ವೃತ್ತ, ಬೆಂಗಳೂರು-02.

ಸಂಖ್ಯೆ: ಜಂ.ಆ/ಸು-4/ಪಿಆರ್/ /19-20 ದಿನಾಂಕ:

# ಸುತ್ತೋಲೆ-4

**ವಿಷಯ:** ಕೋವಿಡ್-19 ಲಾಕ್‌ಡೌನ್ ಪರಿಸ್ಥಿತಿಯನ್ನು ನಿಭಾಯಿಸುವ ನಿಟ್ಟಿನಲ್ಲಿ Quarantine ಆದ ಮನೆಗಳಿಂದ ತ್ಯಾಜ್ಯ ಸಂಗ್ರಹಣೆ ಮಾಡುವಾಗ ಪಾಲಿಸಬೇಕಾದ ಕ್ರಮಗಳು ಹಾಗೂ ಕಾರ್ಮಿಕರ ಸುರಕ್ಷತೆಗಾಗಿ ಪಾಲಿಸಬೇಕಾದ ಮುಂಜಾಗ್ರತಾ ಕ್ರಮಗಳ ಕುರಿತು.

**ಉಲ್ಲೇಖ:-** 1. ದಿನಾಂಕ: 30.03.2020 ರಂದು ಮಾನ್ಯ ಘನವೆತ್ತ ಉಚ್ಚ ನ್ಯಾಯಾಲಯವು ಪಾಲಿಕೆಗೆ ನೀಡಿರುವ ನಿರ್ದೇಶನದಂತೆ.

*****

1. ಪಾಲಿಕೆಯ ಘನತ್ಯಾಜ್ಯ ನಿರ್ವಹಣಾ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಪೌರಕಾರ್ಮಿಕರುಗಳಿಗೆ ಮತ್ತು ಮೇಲ್ವಿಚಾರಕರಿಗೆ ಹಾಗೂ ಗುತ್ತಿಗೆದಾರರಡಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಆಟೋ ಟಿಪ್ಪರ್ ಮತ್ತು ಕಾಂಪ್ಯಾಕ್ಟರ್ ವಾಹನಗಳ ಚಾಲಕರು ಹಾಗೂ ಸಹಾಯಕರುಗಳಿಗೆ ಕಡ್ಡಾಯವಾಗಿ ಸುರಕ್ಷತಾ ಧಿರಿಸುಗಳನ್ನು ನೀಡಲು ಮತ್ತೊಮ್ಮೆ ವೈಯಕ್ತಿಕವಾಗಿ ಗಮನಹರಿಸಿ ಅನುಷ್ಠಾನಗೊಳಿಸಲು ಕ್ರಮವಹಿಸುವುದು.
2. ಪಾಲಿಕೆಯ ಘನತ್ಯಾಜ್ಯ ನಿರ್ವಹಣಾ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಪೌರಕಾರ್ಮಿಕರುಗಳಿಗೆ, ಮೇಲ್ವಿಚಾರಕರಿಗೆ ಹಾಗೂ ಗುತ್ತಿಗೆದಾರರಡಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಆಟೋ ಟಿಪ್ಪರ್ ಮತ್ತು ಕಾಂಪ್ಯಾಕ್ಟರ್ ವಾಹನಗಳ ಚಾಲಕರು ಹಾಗೂ ಸಹಾಯಕರುಗಳಿಗೆ, ಸಂಸ್ಕರಣಾ ಘಟಕಗಳಲ್ಲಿ ಮತ್ತು ಭೂಭರ್ತಿ ಜಾಗಗಳಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿ/ಸಿಬ್ಬಂದಿಗಳಿಗೆ ಆಗಿಂದ್ದಾಗ್ಗೆ ಕಡ್ಡಾಯವಾಗಿ ಆರೋಗ್ಯ ತಪಾಸಣೆ ಮಾಡಿಸಲು ಮತ್ತೊಮ್ಮೆ ಸೂಚಿಸಿದೆ.
3. Quarantine ಆದ ಮನೆಗಳಿಂದ ಉತ್ಪತ್ತಿಯಾಗುವ ತ್ಯಾಜ್ಯವನ್ನು ಪ್ರತ್ಯೇಕವಾಗಿ ನಿರ್ವಹಣೆ ಮಾಡಬೇಕಿರುತ್ತದೆ. ಈಗಾಗಲೇ ಪಾಲಿಕೆ ವ್ಯಾಪ್ತಿಯಲ್ಲಿರುವ ಆಸ್ಪತ್ರೆ/ಕ್ಲಿನಿಕ್‌ಗಳಲ್ಲಿ ಉತ್ಪತ್ತಿಯಾಗುವ ಬಯೋ ಮೆಡಿಕಲ್ ತ್ಯಾಜ್ಯವನ್ನು ಸಂಗ್ರಹಿಸಿ ವಿಲೇವಾರಿ ಮಾಡಲು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಅನುಮತಿ ಪಡೆದಿರುವ ಈ ಕೆಳಕಂಡ ಏಜೆನ್ಸಿಗಳ ಮುಖಾಂತರ Quarantine ಆದ ಮನೆಗಳಿಂದ ತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಮಾಡಲು ಪಾಲಿಕೆಯ ಆರೋಗ್ಯ ವೈದ್ಯಾಧಿಕಾರಿಗಳ ಸಮನ್ವಯದೊಂದಿಗೆ ಅಗತ್ಯ ಕ್ರಮವಹಿಸಲು ಸೂಚಿಸಿದೆ.

| ಕ್ರ.ಸಂ | ವಲಯ | ಏಜೆನ್ಸಿಗಳು |
|---|---|---|
| 1 | ಪೂರ್ವ ಮತ್ತು ಮಹದೇವಪುರ | ಅನಿ ಆಟೋ ಕ್ಲೇವ್, ಹೊಸಕೋಟೆ |
| 2 | ಪಶ್ಚಿಮ ಮತ್ತು ರಾಜರಾಜೇಶ್ವರಿ ನಗರ | ಮೆಡಿಕೇರ್, ದಾಬಸ್‌ಪೇಟ್ |
| 3 | ದಕ್ಷಿಣ ಮತ್ತು ಬೊಮ್ಮನಹಳ್ಳಿ | ಮರಡಿ, ಕನಕಪುರ ರಸ್ತೆ |
| 4 | ದಾಸರಹಳ್ಳಿ ಮತ್ತು ಯಲಹಂಕ | ಪ್ರಜ್ವಲ್ ಬಯೋ ಮೆಡಿಕಲ್ ವೇಸ್ಟ್ ಮ್ಯಾನೇಜ್‌ಮೆಂಟ್, ದೊಡ್ಡ ಬಳ್ಳಾಪುರ |

**Quarantine ಆದ ಮನೆಗಳಿಂದ ತ್ಯಾಜ್ಯ ಸಂಗ್ರಹಣೆ ಮಾಡುವ ಸಂದರ್ಭದಲ್ಲಿ ಅನುಸರಿಸಬೇಕಾದ ಸುರಕ್ಷತೆ ಕ್ರಮಗಳ ಕುರಿತು.**

- Biomedical waste ವಸ್ತುಗಳನ್ನು ಸಂಗ್ರಹಿಸುವ ಎಲ್ಲಾ ಸ್ವಚ್ಛತಾ ಕೆಲಸಗಾರರಿಗೆ ವೈಯಕ್ತಿಕ ರಕ್ಷಣಾ ಕಿಟ್‌ಗಳನ್ನು ನೀಡುವುದು.
- Quarantine ಆದ ಮನೆಗಳಿಂದ ತ್ಯಾಜ್ಯ ಸಂಗ್ರಹಣೆ ಹಾಗೂ ಸಾಗಣೆ ಮಾಡುವ ಎಲ್ಲಾ ಸ್ವಚ್ಛತಾ ಕೆಲಸಗಾರರಿಗೆ ಕಡ್ಡಾಯವಾಗಿ ಪ್ರತಿನಿತ್ಯ ಹೊಸ ವೈಯಕ್ತಿಕ ರಕ್ಷಣಾ ಕಿಟ್‌ಗಳನ್ನು ನೀಡುವುದು.

Scanned by CamScanner

- ವೈಯಕ್ತಿಕ ರಕ್ಷಣಾ ಕಿಟ್ ನಲ್ಲಿ Three Layered Mask, Hand Gloves, Goggles, Gown ಮುಂತಾದ ಪರಿಕರಗಳು ಇರುವಂತೆ ಕ್ರಮವಹಿಸುವುದು.
- Quarantine ಆದ ಮನೆಗಳಿಗೆ ತ್ಯಾಜ್ಯ ಸಂಗ್ರಹಣೆಗೆ ಹೋಗುವ ಮುನ್ನ ಹಾಗೂ ತ್ಯಾಜ್ಯ ಸಂಗ್ರಹಿಸಿ ಸಾಗಿಸಿದ ನಂತರ ಪ್ರತಿನಿತ್ಯ ಎಲ್ಲಾ ಸ್ವಚ್ಛತಾ ಕೆಲಸಗಾರರಿಗೆ Thermal sensors ಮೂಲಕ ತಪಾಸಣೆಗೆ ಒಳಪಡಿಸುವುದು ಮತ್ತು ಸದರಿ ಕೆಲಸಗಾರರು ಕಡ್ಡಾಯವಾಗಿ Soap ಮೂಲಕ ಕೈ ತೊಳೆದುಕೊಳ್ಳುವುದನ್ನು ಖಚಿತಪಡಿಸಿಕೊಳ್ಳುವುದು.
- ತ್ಯಾಜ್ಯ ಸಂಗ್ರಹಣೆ ಮಾಡುವಾಗ ಕೆಲಸಗಾರರು ಕನಿಷ್ಠ 1-3 ಮೀಟರ್ ಸಾಮಾಜಿಕ ಅಂತರ ಕಾಯ್ದುಕೊಳ್ಳುವಂತೆ ಕ್ರಮವಹಿಸುವುದು.
- ಸದರಿ ಕರ್ತವ್ಯ ನಿರತ ಪೌರಕಾರ್ಮಿಕರು ಅಥವಾ ಇತರೆ ಸ್ವಚ್ಛತಾ ಕೆಲಸಗಾರರಿಗೆ ಅನಾರೋಗ್ಯ ಉಂಟಾದಲ್ಲಿ ಕೂಡಲೇ ಆಸ್ಪತ್ರೆಗಳಿಗೆ ಮುಂದಿನ ಅಗತ್ಯ ಚಿಕಿತ್ಸೆಗಾಗಿ ಕಳುಹಿಸುವುದು.
- ಸ್ವಚ್ಛತಾ ಕೆಲಸಗಾರರು ಉಪಯೋಗಿಸಿದ ರಕ್ಷಣಾ ಪರಿಕರಗಳನ್ನು ಒಂದು ಕಡೆ ಸಂಗ್ರಹಿಸಿ ಅದನ್ನು ಅಪಾಯಕಾರಿ ಬಯೋಮೆಡಿಕಲ್ ತ್ಯಾಜ್ಯವೆಂದು ಪರಿಗಣಿಸಿ Incineration/ deep burial pit ಮೂಲಕ ವಿಲೇವಾರಿ ಮಾಡುವುದು.

Quarantine ಆದ ಮನೆಗಳಿಂದ ತ್ಯಾಜ್ಯ ನಿರ್ವಹಣೆ ಮಾಡುವ ನಿಟ್ಟಿನಲ್ಲಿ ಪಾಲಿಕೆಯ ಆರೋಗ್ಯ ಇಲಾಖೆಯ ಸಮನ್ವಯತೆ ಸಾಧಿಸಿಕೊಂಡು Biomedical waste Management Rules 2016 ರ ರೀತ್ಯಾ ಅಗತ್ಯವಿರುವ ಎಲ್ಲಾ ಕ್ರಮಗಳನ್ನು ಅನುಸರಿಸಲು ಸೂಚಿಸಿದೆ.

ಜಂಟಿ ಆಯುಕ್ತರು (ಘ.ತ್ಯಾ.ನಿ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ರವರಿಗೆ,**

1. ಮಾನ್ಯ ಆಯುಕ್ತರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಘ.ತ್ಯಾ.ನಿ) ರವರ ಅವಗಾಹನೆಗಾಗಿ ಕಳುಹಿಸಿದೆ.
3. ಎಲ್ಲಾ ವಲಯಗಳ ಅಪರ/ ಜಂಟಿ ಆಯುಕ್ತರರು ಗಳಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
4. ಎಲ್ಲಾ ವಲಯಗಳ ಮುಖ್ಯ ಅಭಿಯಂತರರು (ಘ.ತ್ಯಾ.ನಿ) ರವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
5. ಎಲ್ಲಾ ವಲಯಗಳ ಮುಖ್ಯ ಅಭಿಯಂತರರುಗಳಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
6. ಅಧೀಕ್ಷಕ ಅಭಿಯಂತರರು (ಘ.ತ್ಯಾ.ನಿ) ರವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
7. ಎಲ್ಲಾ ವಲಯಗಳ ಅಧೀಕ್ಷಕ ಅಭಿಯಂತರರುಗಳಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
8. ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ- ಕೇಂದ್ರ) ರವರುಗಳಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
9. ಎಲ್ಲಾ ವಿಭಾಗಗಳ ಸಹಾಯಕ ಕಾರ್ಯಪಾಲಕ ಅಭಿಯಂತರರು (ಘತ್ಯಾನಿ) ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
10. ಕಛೇರಿ ಕಡತಕ್ಕೆ.
11. ಎಲ್ಲಾ ವಾರ್ಡ್‌ಗಳ ಕಿರಿಯ ಆರೋಗ್ಯ ಪರಿವೀಕ್ಷಕರು ಹಾಗೂ ಘನತ್ಯಾಜ್ಯ ಇನ್ಸ್‌ಪೆಕ್ಟರ್ಸ್‌ಗಳಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.

**<u>ಪ್ರತಿಯನ್ನು:</u>**

1. ಪೂಜ್ಯ ಮಹಾಪೌರರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ಉಪ ಮಹಾಪೌರರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
3. ಮಾನ್ಯ ಆಡಳಿತ ಪಕ್ಷದ ನಾಯಕರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
4. ಮಾನ್ಯ ವಿರೋಧ ಪಕ್ಷದ ನಾಯಕರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
5. ಮಾನ್ಯ ಜೆ.ಡಿ.ಎಸ್ ಪಕ್ಷದ ನಾಯಕರ ಅವಗಾಹನೆಗಾಗಿ ಕಳುಹಿಸಿದೆ.
6. ಮಾನ್ಯ ಅಧ್ಯಕ್ಷರು (ಆರೋಗ್ಯ ಸ್ಥಾಯಿ ಸಮಿತಿ) ರವರ ಅವಗಾಹನೆಗಾಗಿ ಕಳುಹಿಸಿದೆ.

Scanned by CamScanner